**ದಿನಾಂಕಃ 27.11.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಂದುವರೆದ ಪಾಟಿ ಸವಾಲುಃ ಪ್ರತಿವಾದಿ ಪರ ಶ್ರೀ ಇ.ಎನ್. ವಕೀಲರಿಂದಃ**

ದಾವಾ ಆಸ್ತಿಯು ನಮ್ಮ ಕುಟುಂಬದಲ್ಲಿ ಹಿಸ್ಸೆ ಆದ ನಂತರ ನನ್ನ ತಾಯಿ ಹೆಸರಿಗೆ ಬಂತು ಅಂದರೆ ಸರಿ. ನಮ್ಮ ಕುಟುಂಬದಲ್ಲಿ ನೊಂದಾಯಿತ ಹಿಸ್ಸಾ ಪತ್ರ ಆಗಿದೆ ಅಂದರೆ ಸರಿ. ನನ್ನ ತಾಯಿ ದಿಃ 05.02.2013 ರಂದು 1 ನೇ ಪ್ರತಿವಾದಿಗೆ ದಾನಪತ್ರ ಮಾಡಿರುತ್ತಾರೆ ಅಂದರೆ ಸರಿ. ದಾವಾ ಸ್ವತ್ತಿನಲ್ಲಿ ಯಾವುದೇ ಹಕ್ಕು ಇಲ್ಲದೆ ಇದ್ದರೂ ಸಹ ದುರ್ವ್ಯಾಜ್ಯ ಮಾಡುವ ಸಲುವಾಗಿ ಸುಳ್ಳು ದಾವೆಯನ್ನು ಸಲ್ಲಿಸಿರುತ್ತೀರಿ ಅಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಯಾವುದೇ ಹಕ್ಕು ಇಲ್ಲ ಅಂದರೆ ಸರಿಯಲ್ಲ. ಮೌಖಿಕ ಒಪ್ಪಂದ ಆಗಿತ್ತು ಎಂದು ನಾನು ಸಾಧಿಸುತ್ತಿದ್ದೇನೆ, ಆ ತರಹ ಯಾವುದೇ ಒಪ್ಪಂದ ಆಗಿಲ್ಲ ಅಂದರೆ ಸರಿಯಲ್ಲ. ದಾವೆಗೋಸ್ಕರ ಅಂತಹ ಮೌಖಿಕ ಒಪ್ಪಂದ ಆಗಿದೆ ಎಂದು ಸೃಷ್ಟಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ದಾವಾದಲ್ಲಿ ಕೇಳಿರುವ ಪರಿಹಾರಗಳನ್ನು ಪಡೆಯಲು ಅರ್ಹರಲ್ಲ ಅಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಸಿ/ಸಿ 1 ನೇ ಹೆಚ್ಚುವರಿ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**